For More Job News Visit: www.kpscvaani.com

ಕರ್ನಾಟಕ ಸರ್ಕಾರ

ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ, ತಾಲೂಕ ಪಂಚಾಯತ ಹಾವೇರಿ, ಜಿಲ್ಲೆ : ಹಾವೇರಿ

ಪ್ರಕಟಣೆ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಮತ್ತು ಕಾಮಗಾರಿಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವ ಸಲುವಾಗಿ ಹಾವೇರಿ ಜಿಲ್ಲೆಯ **08** ತಾಲೂಕುಗಳಲ್ಲಿ ಗ್ರಾಮ ಪಂಚಾಯತ ಮಟ್ಟದಲ್ಲಿ ಕುಟುಂಬಗಳ ನೋಂದಣಿ, ಕೆಲಸದ ಬೇಡಿಕೆ ಸ್ವೀಕರಿಸುವುದು ಮತ್ತು ಸ್ವೀಕೃತಿ ನೀಡುವುದು, ಗ್ರಾಮ ಸಭೆ ಮತ್ತು ಸಾಮಾಜಿಕ ಪರಿಶೋಧನಾ ಸಭೆಗಳನ್ನು ಗ್ರಾಮ ಸಭೆಗಳನ್ನು ಆಯೋಜಿಸಲು ನೆರವು ನೀಡುವುದು. ಕಾಯಕ ಬಂಧುಗಳ ಮೇಲ್ವಿಚಾರಣೆ, ಕಡತ ಮತ್ತು ರಜಿಸ್ಟರ್‌ಗಳ ನಿರ್ವಹಣೆ ಇತ್ಯಾದಿ ಕರ್ತವ್ಯಗಳನ್ನು ನಿರ್ವಹಿಸುವ ಮೂಲಕ ಯೋಜನೆಯ ಆಡಳಿತವನ್ನು ಉತ್ತಮಗೊಳಿಸುವಲ್ಲಿ ನೆರವು ನೀಡುವ ಸಲುವಾಗಿ 2020–21 ನೇ ಸಾಲಿನಲ್ಲಿ 20000 ಮಾನವ ದಿನಗಳಿಗಿಂತ ಹೆಚ್ಚಿನ ಉದ್ಯೋಗ ಸೃಜನೆ ಮಾಡಿದ ಗ್ರಾಮ ಪಂಚಾಯತಗಳಲ್ಲಿ "ಗ್ರಾಮ ಕಾಯಕ ಮಿತ್ರ" ರನ್ನು ಗೌರವಧನದ ಆಧಾರದಲ್ಲಿ 79 ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲು ಉಲ್ಲೇಖದನ್ವಯ ನಿರ್ದೇಶನ ನೀಡಿರುತ್ತಾರೆ.

ಆದ್ದರಿಂದ ಹಾವೇರಿ ತಾಲೂಕಿನ ಗ್ರಾಮ ಪಂಚಾಯತಗಳಾದ 1. ಬಸಾಪುರ 2. ಕನವಳ್ಳಿ 3. ಅಗಡಿ 4. ಕನಕಾಪುರ. ಗ್ರಾಮ ಪಂಚಾಯತಿಗಳಿಗೆ ಗ್ರಾಮ ಕಾಯಕ ಮಿತ್ರರನ್ನು ನೇಮಕ ಮಾಡಿಕೊಳ್ಳಲು ಅವಕಾಶ ಮಾಡಿಕೊಡಲಾಗಿರುತ್ತದೆ. ಕಾರಣ ಅರ್ಹ ಅಭ್ಯರ್ಥಿಗಳು ಹಾವೇರಿ ತಾಲೂಕಿನ ಆಯ್ದ ಗ್ರಾಮ ಪಂಚಾಯತಗಳಿಗೆ ಮಾತ್ರ ಅರ್ಜಿಯನ್ನು ಆನ್‌ಲೈನ್ (**haveri.nic.in**)ನಲ್ಲಿ ಸಲ್ಲಿಸುವುದು.

(1) ಅರ್ಜಿಯನ್ನು ಸಲ್ಲಿಸಲು ಪ್ರಾರಂಭ ದಿನಾಂಕ : **15/07/2021** (2) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **29/07/2021** (3) ಅರ್ಜಿ ಸಲ್ಲಿಸುವ ಆನ್ ಲೈನ್ ವಿಳಾಸ : **haveri.nic.in** (4) ಮಾಸಿಕ ಗೌರವ ಧನ ರೂ. **6000/–** (5) ಕಾರ್ಯನಿರ್ವಹಣೆ ಆಧರಿಸಿ ಪ್ರೋತ್ಸಾಹ ಧನ ರೂ. **5000/–** (6) ಕಾಯಕ ಮಿತ್ರ ಆಯ್ಕೆ ವಿಧಾನ, ಪ್ರಕ್ರಿಯೆ, ಗೌರವಧನ, ನಿರ್ವಹಿಸಬೇಕಾದ ಕರ್ತವ್ಯಗಳು ಹಾಗೂ ನೇಮಕಾತಿ ಷರತ್ತುಗಳಿಗೆ ಉಲ್ಲೇಖಿತ ಪತ್ರದಲ್ಲಿರುವಂತೆ ಕ್ರಮ ವಹಿಸುವುದು.

ಅರ್ಹತೆಗಳು : (1) "ಗ್ರಾಮ ಕಾಯಕ ಮಿತ್ರ" ಹುದ್ದೆಗಳಿಗೆ ಮಹಿಳೆಯರು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. (2) ವಿದ್ಯಾರ್ಹತೆ ಅಭ್ಯರ್ಥಿಯು ಕನಿಷ್ಠ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. (3) ಅಭ್ಯರ್ಥಿಯು 01–01–2021ಕ್ಕೆ ಅನ್ವಯಿಸುವಂತೆ ತಾನು ಅರ್ಜಿ ಸಲ್ಲಿಸುವ ಗ್ರಾಮ ಪಂಚಾಯತಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕ್ರಿಯಾಶೀಲ ಜಾಬ್ ಕಾರ್ಡ್ ಹೊಂದಿರಬೇಕು. (4) ಅಭ್ಯರ್ಥಿಯು ಕಳೆದ 3 ವರ್ಷಗಳಲ್ಲಿ (2018–19, 2019–20, 2020–21) ಕನಿಷ್ಠ 2 ವರ್ಷ ಯೋಜನೆಯಡಿ ಅಕುಶಲ ಕೂಲಿಕಾರರಾಗಿ ಕೆಲಸ ನಿರ್ವಹಿಸಿರಬೇಕು. (5) ವಯೋಮಿತಿ ದಿನಾಂಕ: 01–01–2021 ಕ್ಕೆ ಅನ್ವಯಿಸುವಂತೆ 45 ವರ್ಷ ಮೀರಿರಬಾರದು. (6) ಓದು ಮತ್ತು ಬರಹ ಚೆನ್ನಾಗಿ ತಿಳಿದಿರಬೇಕು. (7) ಗ್ರಾಮ ಕಾಯಕ ಮಿತ್ರ ಹುದ್ದೆಗೆ ಅರ್ಜಿ ಆನ್‌ಲೈನ್‌ನಲ್ಲಿ (**haveri.nic.in**) ಸಲ್ಲಿಸುವಾಗ ಆಯಾ ಗ್ರಾಮ ಪಂಚಾಯತಗಳ ವ್ಯಾಪ್ತಿಯಲ್ಲಿ ವಾಸಿಸುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. (8) ಅಭ್ಯರ್ಥಿಯು ಪರಿಣಾಮಕಾರಿ ಸಂವಹನ ಕೌಶಲ್ಯ, ಉತ್ತಮ ನಾಯಕತ್ವ ಗುಣ ಹಾಗೂ ಸಮುದಾಯದೊಂದಿಗೆ ಸ್ಪಂದಿಸುವ ಗುಣಲಕ್ಷಣಗಳನ್ನು ಹೊಂದಿರಬೇಕು. (9) ಗ್ರಾಮ ರೋಜಗಾರ ಮಿತ್ರರು ಸಮುದಾಯ ಕಾರ್ಯನಿರ್ವಹಣೆ ಮಾಡಲು ನಿರ್ದಿಷ್ಟ ಸಮಯವನ್ನು ನೀಡಬೇಕಾಗಿದ್ದು, ಇದಕ್ಕೆ ಗ್ರಾಮ ಕಾಯಕ ಮಿತ್ರರ ಕುಟುಂಬ ಮತ್ತು ಸಮಾಜ ಬೆಂಬಲವಾಗಿರಬೇಕು.

ವಿಶೇಷ ಸೂಚನೆ : (1) ಹೆಚ್ಚಿನ ಮಾಹಿತಿಗಾಗಿ ಈ ಕೆಳಕಂಡ ತಾಲೂಕು ಪಂಚಾಯತ ಕಾರ್ಯಾಲಯದ ಸ್ಥಿರ ದೂರವಾಣಿ ಸಂಖ್ಯೆಗೆ ಸಂಪರ್ಕಿಸುವುದು.

ತಾಲೂಕು : ಹಾವೇರಿ, ದೂರವಾಣಿ ಸಂಖ್ಯೆ : **08375–232446**

ಸಹಿ/– ಕಾರ್ಯನಿರ್ವಾಹಕ ಅಧಿಕಾರಿಗಳು,

ವಾಸಾಸಂಇ/ಹಾವೇರಿ/ಎಂ.ಸಿ.ಎ/164/2021–22 ತಾಲೂಕ ಪಂಚಾಯತ್, ಹಾವೇರಿ